**Akashvani : Bangalore**
**Regional Bulletin In Kannada**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**25.04.2026 / 18.40 hrs**
**<><*<><>*><>**

ಮುಖ್ಯಾಂಶಗಳು

**೧. ಬೆಂಗಳೂರು-ಮಂಗಳೂರು-ಮಡ್‌ಗಾಂವ್ ವಂದೇ ಭಾರತ್ ರೈಲು ಸೇವೆ ಶೀಘ್ರವೇ ಆರಂಭ - ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಸ್ಪಷ್ಟನೆ**

**೨. ಬೆಂಗಳೂರಿನ ಹೆಸರಘಟ್ಟದಲ್ಲಿ ಪತ್ತೆಯಾಗಿದ್ದ ಹಕ್ಕಿಜ್ವರ ನಿಯಂತ್ರಣದಲ್ಲಿದೆ - ಆರೋಗ್ಯ ಇಲಾಖೆ ಸ್ಪಷ್ಟನೆ**

**೩. ಸಚಿವ ಸುಧಾಕರ್ ಆರೋಗ್ಯ ವಿಚಾರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ - ತ್ಯಾಜ್ಯ ಕೋಶ ಕಸಿ ಕುರಿತಂತೆ ನಾಳೆ ಅಂತಿಮ ತೀರ್ಮಾನ**

**೪. ಪರಿಶಿಷ್ಟ ಜಾತಿಗಳಿಗೆ ಒಳಮೀಸಲಾತಿ ನೀಡುವ ಮೂಲಕ ಸರ್ಕಾರದಿಂದ ಗೊಂದಲ ಸೃಷ್ಟಿ - ಪ್ರತಿಪಕ್ಷ ಬಿಜೆಪಿ ಆರೋಪ**

**೫. ಆಕಾಶವಾಣಿಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಅವರಿಂದ ಮನದ ಮಾತು**

**<><*<><>*><>**

ಬೆಂಗಳೂರಿನ ಭಾರತ ಅರ್ಥ್ ಮೂವರ್ಸ್ ಲಿಮಿಟೆಡ್-ಬೆಮೆಲ್ ಘಟಕಕ್ಕೆ ಕೇಂದ್ರ ರೈಲ್ವೆ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಇಲಾಖೆ ಸಚಿವ ಅಶ್ವಿನಿ ವೈಷ್ಣವ್ ಇಂದು ಭೇಟಿ ನೀಡಿ, ಉತ್ಪಾದನೆಗೊಳ್ಳುತ್ತಿರುವ ಮೆಟ್ರೋ ಬೋಗಿಗಳನ್ನು ಪರಿಶೀಲಿಸಿದರು. ಬೆಂಗಳೂರು-ಮಂಗಳೂರು-ಮಡ್‌ಗಾಂವ್ ವಂದೇ ಭಾರತ್ ರೈಲು ಸೇವೆ ಶೀಘ್ರವೇ ಆರಂಭವಾಗಲಿದೆ ಎಂದು ಸಚಿವರು ಘೋಷಿಸಿದ್ದಾರೆ. ಬೆಂಗಳೂರು ಮತ್ತು ಮುಂಬೈ ನಡುವೆ ಸೂಪರ್ ಫಾಸ್ಟ್ ಮತ್ತು ವಂದೇ ಭಾರತ್ ಸ್ಲೀಪರ್ ರೈಲು ಕೂಡ ಶೀಘ್ರದಲ್ಲೇ ಕಾರ್ಯ ನಿರ್ವಹಿಸಲಿವೆ ಎಂದರು.

**ಧ್ವನಿ: ಅಶ್ವಿನಿ ವೈಷ್ಣವ್ ( ೨೩ ಸೆಕೆಂಡ್ಸ್)**

ಇದೇ ವೇಳೆ ಬೆಂಗಳೂರಿನಲ್ಲಿ ಸಬ್‌ಅರ್ಬನ್ ರೈಲು ಯೋಜನೆಯ ಪ್ರಗತಿಯ ಬಗ್ಗೆಯೂ ಅವರು ಸಂತಸ ವ್ಯಕ್ತಪಡಿಸಿದರು.

<><*<><>*><>

ಬೆಂಗಳೂರಿನ ಹೆಸರಘಟ್ಟದಲ್ಲಿರುವ ಸರ್ಕಾರಿ ಕೋಳಿ ತರಬೇತಿ ಕೇಂದ್ರದಲ್ಲಿ ವರದಿಯಾದ ಹಕ್ಕಿಜ್ವರ ಹರಡುವಿಕೆಯನ್ನು ನಿಯಂತ್ರಿಸಲಾಗಿದೆ ಎಂದು ಆರೋಗ್ಯ ಇಲಾಖೆ ಸ್ಪಷ್ಟಪಡಿಸಿದೆ. ಈ ಕುರಿತಂತೆ ಹೇಳಿಕೆ ನೀಡಿರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ೧೦ ದಿನಗಳ ಕಾಲ ನಿರಂತರ ಮೇಲ್ವಿಚಾರಣೆ ನಡೆಸುವ ಮೂಲಕ ನಿಯಂತ್ರಣಕ್ಕೆ ತರಲಾಗಿದೆ ಎಂದು ತಿಳಿಸಿದೆ. ಇದುವರೆಗೆ ಯಾವುದೇ ಮಾನವ ಪ್ರಕರಣಗಳು ಪತ್ತೆಯಾಗಿಲ್ಲ. ಏಪ್ರಿಲ್ ೧೪ರಂದು ಹಕ್ಕಿಜ್ವರ ಪತ್ತೆಯಾಗಿದ್ದು, ಭೋಪಾಲ್‌ನ ರಾಷ್ಟ್ರೀಯ ಹೈ ಸೆಕ್ಯೂರಿಟಿ ಪ್ರಾಣಿ ರೋಗಗಳ ಸಂಸ್ಥೆಯ ಪ್ರಯೋಗಾಲಯಕ್ಕೆ ಮಾದರಿ ಕಳುಹಿಸಲಾಗಿದ್ದು, ಹಕ್ಕಿಜ್ವರ ದೃಢಪಟ್ಟಿತ್ತು. ಈ ಹಿನ್ನೆಲೆಯಲ್ಲಿ ೧೦ ಕಿಲೋಮೀಟರ್ ವ್ಯಾಪ್ತಿಯ ೨೨ ಹಳ್ಳಿಗಳಲ್ಲಿ ೨೮ ಸಾವಿರದ ೧೭೨ ಜನರನ್ನು ಮೇಲ್ವಿಚಾರಣೆ ನಡೆಸಲಾಗಿತ್ತು. ಐದನೇ ದಿನದ ಬಳಿಕ ಬೆಂಗಳೂರಿನ ರಾಷ್ಟ್ರೀಯ ವೈರಾಲಜಿ ಸಂಸ್ಥೆಗೆ ಕಳುಹಿಸಲಾಗಿದ್ದ ಮಾದರಿಗಳು ನಕರಾತ್ಮಕವಾಗಿದೆ ಎಂದು ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ. ಇದುವರೆಗೆ ಯಾವುದೇ ಮಾನವ ಎಚ್-೫, ಎನ್-೧ ಸೋಂಕಿನ ಪ್ರಕರಣಗಳು ಪತ್ತೆಯಾಗಿಲ್ಲ ಎಂದು ಅಧಿಕಾರಿಗಳು ದೃಢಪಡಿಸಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಎಲೆಕ್ಟ್ರಾನಿಕ್ ಸಿಟಿಯ ಕೃಷ್ಣ ಆರೋಗ್ಯ ವಿಜ್ಞಾನ ಸಂಸ್ಥೆ-ಕಿಮ್ಸ್‌ಗೆ ಭೇಟಿ ನೀಡಿ ಸಚಿವ ಸುಧಾಕರ್ ಅವರ ಆರೋಗ್ಯ ವಿಚಾರಿಸಿದರು. ಸಚಿವರಿಗೆ ನೀಡುತ್ತಿರುವ ಚಿಕಿತ್ಸೆ ಬಗ್ಗೆ ವೈದ್ಯರಿಂದ ಮಾಹಿತಿ ಪಡೆದ ಮುಖ್ಯಮಂತ್ರಿಗಳು ಕುಟುಂಬದವರೊಂದಿಗೂ ಮಾತುಕತೆ ನಡೆಸಿದರು. ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸುಧಾಕರ್ ಅವರಿಗೆ ಪ್ರಜ್ಞೆ ಬಂದ ಬಳಿಕ ಶ್ವಾಸಕೋಶದ ಕಸಿ ಕುರಿತಂತೆ ವೈದ್ಯರು ತೀರ್ಮಾನ ತೆಗೆದುಕೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

**ಧ್ವನಿ : ಸಿದ್ದರಾಮಯ್ಯ ( ೨೬ ಸೆಕೆಂಡ್ಸ್)**

ಸಚಿವರಾದ ಜಮೀರ್ ಅಹಮದ್ ಖಾನ್, ಬೈರತಿ ಸುರೇಶ್, ವಿಧಾನಸಭೆಯ ಮುಖ್ಯ ಸಚೇತಕ ಅಶೋಕ ಪಟ್ಟಣ, ಮಾಯಕೊಂಡ ಶಾಸಕ ಬಸವಂತಪ್ಪ ಅವರು ಸುಧಾಕರ್ ಅವರ ಆರೋಗ್ಯ ವಿಚಾರಿಸಿದರು.

<><*<><>*><>

ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಕುರಿತಂತೆ ಸಚಿವ ಸಂಪುಟದಲ್ಲಿ ಸರ್ಕಾರ ತೆಗೆದುಕೊಂಡಿರುವ ನಿರ್ಧಾರ ಆ ವರ್ಗದವರಲ್ಲಿ ಗೊಂದಲ ಸೃಷ್ಟಿಗೆ ಕಾರಣವಾಗಿದೆ ಎಂದು ಬಿಜೆಪಿ

ನಾಯಕರು ಆರೋಪಿಸಿದ್ದಾರೆ. ಬಿಜೆಪಿ ಕಚೇರಿಯಲ್ಲಿಂದು ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಸಂಸದ ಎಂ.ಗೋವಿಂದ ಕಾರಜೋಳ, ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಶಾಸಕ ಎನ್.ಮಹೇಶ್, ಕೇಂದ್ರ ಮಾಜಿ ಸಚಿವ ಎ.ನಾರಾಯಣಸ್ವಾಮಿ ಮತ್ತಿತರರು ಪಾಲ್ಗೊಂಡಿದ್ದರು. ಈ ವೇಳೆ ಗೋವಿಂದ ಕಾರಜೋಳ ಮಾತನಾಡಿ, ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಹಂಚಿಕೆಗಾಗಿ ಸರ್ಕಾರ ರಚನೆ ಮಾಡಿದ್ದ ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ವರದಿ ತಿಸ್ಕರಿಸಲಾಗಿದೆ. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ನೀಡಿರುವ ವರದಿಯನ್ನು ಅಂಗೀಕರಿಸಲಾಗಿದೆ. ಈ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಜನತೆಗೆ ಅನ್ಯಾಯ ಮಾಡಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಸರ್ಕಾರಿ ಉದ್ಯೋಗಗಳನ್ನು ಭರ್ತಿ ಮಾಡದೇ ಯುವ ಸಮೂಹದ ಅಸಮಾಧಾನ ತಡೆಯಲು ಒಳ ಮೀಸಲಾತಿ ನೀಡುವ ನಿರ್ಧಾರ ತೆಗೆದುಕೊಳ್ಳಲಾಗಿದೆ. ಪರಿಶಿಷ್ಟ ಜಾತಿಗಳಿಗೆ ಶೇಕಡ ೧೭ ರಷ್ಟು ಮೀಸಲಾತಿ ನೀಡುವ ಕಾಯಿದೆ ಜಾರಿಯಲ್ಲಿದ್ದರೂ ಶೇಕಡ ೧೫ರಂತೆ ಒಳ ಮೀಸಲಾತಿ ಹಂಚಿಕೆ ಮಾಡಲಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

**<><*<><>*><>**

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೩ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವು ಬಿತ್ತರಗೊಳ್ಳಲಿದೆ.

**<><*<><>*><>**

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಮುಖ್ಯಮಂತ್ರಿ ಸ್ಥಾನಕ್ಕಾಗಿ ದೆಹಲಿ ಪ್ರವಾಸ ಕೈಗೊಂಡಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿಗೆ ಸಂಬಂಧಿಸಿದ ಸಮಸ್ಯೆಗಳು ಮತ್ತು ಅಭಿವೃದ್ಧಿ ಕಾರ್ಯಗಳ ಬಗ್ಗೆ ಚರ್ಚಿಸಲು ದೆಹಲಿಗೆ ತೆರೆಳಿದ್ದಾರೆ ಎಂದು

ಹೇಳಿದ್ದಾರೆ. ಪ್ರತಿಪಕ್ಷ ನಾಯಕರ ಮೇಯಲ್ಲಿ ನಡೆಯಬಹುದು ಎಂದು ಹೇಳಲಾದ ರಾಜಕೀಯ ಕ್ರಾಂತಿಯ ವದಂತಿಗಳನ್ನು ಅವರು ತಳ್ಳಿ ಹಾಕಿದ್ದಾರೆ.

<><*<><>*><>

ಬೆಂಗಳೂರು-ತುಮಕೂರು ರೈಲುಮಾರ್ಗವನ್ನು ಚತುಷ್ಪಥಗೊಳಿಸಲಾಗುವುದು ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ತುಮಕೂರಿನಲ್ಲಿ ಎರಡು ಪಾದಚಾರಿ ಸುರಂಗ ಮಾರ್ಗಗಳ ನಿರ್ಮಾಣಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಯಲಹಂಕದಿಂದ ಯಶವಂತಪುರ, ತುಮಕೂರು ಮಾರ್ಗವಾಗಿ ಅರಸೀಕೆರೆಗೆ ಹೊಸ ಮೆಮು ರೈಲು ಸೇವೆಯನ್ನು ಶೀಘ್ರದಲ್ಲೇ ಪ್ರಾರಂಭಿಸಲಾಗುವುದು ಎಂದು ಹೇಳಿದ್ದಾರೆ.  ತುಮಕೂರು ಮತ್ತು ಕ್ಯಾತ್ಸಂದ್ರ ರೈಲುನಿಲ್ದಾಣಗಳ ನಡುವೆ ಮಾರುತಿ ನಗರದಲ್ಲಿ ೩ ಕೋಟಿ ೪ ಲಕ್ಷ ರೂಪಾಯಿ ವೆಚ್ಚದಲ್ಲಿ ಪಾದಚಾರಿ ಸಬ್ ವೇ ನಿರ್ಮಿಸಲಾಗುವುದು. ಈ ಎರಡು ಕಾಮಗಾರಿಗಳು ಜನವರಿ ೨೦೨೬ ಕ್ಕೆಪೂರ್ಣಗೊಳ್ಳಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿ ಇ-ಖಾತಾವನ್ನು S◌oS ಆಸ್ತಿ ತೆರಿಗೆ ಐಡಿ ಬಳಸಿ ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ವ್ಯವಸ್ಥೆ ಜಾರಿಗೆ ತರಲಾಗಿದೆ ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್‌ರಾವ್ ತಿಳಿಸಿದ್ದಾರೆ. ಬೆಂಗಳೂರು ನಗರದ ೫ ನಗರ ಪಾಲಿಕೆಗಳು ನಾಗರಿಕರ ಸೌಲಭ್ಯಕ್ಕಾಗಿ S◌oS ಪ್ರಾಪರ್ಟಿ ತೆರಿಗೆ ಐಡಿ ಬಳಸಿ ಇ-ಖಾತಾವನ್ನು ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡುವ ವ್ಯವಸ್ಥೆಯನ್ನು ಜಾರಿಗೆ ತಂದಿವೆ. ಸುಮಾರು ೧೩ ಲಕ್ಷ ಇ-ಖಾತಾಗಳನ್ನು ತಕ್ಷಣವೇ ನಾಗರಿಕರಿಗೆ ಲಭ್ಯವಾಗುವಂತೆ ಮಾಡುವುದು ಹಾಗೂ ಅನಗತ್ಯ ವಿಳಂಬ ಮತ್ತು ಆಡಳಿತಾತ್ಮಕ ಅಡಚಣೆಗಳನ್ನು ಈ ಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಮಹೇಶ್ವರ್ ರಾವ್ ಸ್ಪಷ್ಟಪಡಿಸಿದ್ದಾರೆ.

<><*<><>*><>

ನಶಾ ಮುಕ್ತ ಅಭಿಯಾನ  ಕೇವಲ ಒಂದು ಅಭಿಯಾನವಾಗಿ ಉಳಿಯಬಾರದು. ಇದೊಂದು ಜಾಗೃತಿಯ ಸರಪಳಿಯಾಗಬೇಕು ಎಂದು ಕೇಂದ್ರ ಜಲಶಕ್ತಿ, ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅಭಿಪ್ರಾಯಪಟ್ಟಿದ್ದಾರೆ.  ತುಮಕೂರಿನಲ್ಲಿ ಹಮ್ಮಿಕೊಳ್ಳಲಾಗಿದ್ದ 'ನಶಾಮುಕ್ತ ಭಾರತ-ನಶಾಮುಕ್ತ ಕರ್ನಾಟಕ' ಹಾಗೂ 'ಯುವ ಶುದ್ಧಿ ಅಭಿಯಾನ' ದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಎಲ್ಲಾ ವಿಶ್ವವಿದ್ಯಾಲಯಗಳೂ, ಉಪನ್ಯಾಸಕರೂ, ಪೋಷಕರು,

ನಾಗರಿಕರು ನಶಾ ಮುಕ್ತ ಅಭಿಯಾನಕ್ಕೆ ಕೈಜೋಡಿಸುವ ಮೂಲಕ ಶಕ್ತಿ ತುಂಬಬೇಕು ಎಂದು ಕರೆ ನೀಡಿದರು.

**<><*<><>*><>**

ಬೆಳಗಾವಿಯ ಮರಾಠಾ ಲಘು ಪದಾತಿದಳದ ಆವರಣದಲ್ಲಿ ೧೬ನೆಯ ಭೈರವ ಬೆಟಾಲಿಯನ್ ಸಂಸ್ಥಾಪನೆ ದಿನಾಚರಣೆ ಆಚರಿಸಲಾಯಿತು. ಭೈರವ ಪಡೆಯ ಪರೇಡ್ ಗೌರವ ವಂದನೆ ಸ್ವೀಕರಿಸಿದ ಎಮ್‌ಎಲ್‌ಆರ್‌ಸಿ ಕಮಾಂಡೆಂಟ್ ಬ್ರಿಗೇಡಿಯರ್ ಜ್ಯಾಯ್ ದೀಪ್ ಮುಖರ್ಜಿ ಭೈರವ ಬೆಟಾಲಿಯನ್ ನೂತನ ಅಧಿಕಾರಿಗಳಿಗೆ ಧ್ವಜ ಹಸ್ತಾಂತರಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**